# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 749 (957)

ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 15-12-2025

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ-ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡದೆ ಕಳೆದ 10-12 ವರ್ಷಗಳಿಂದ ನೆನಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| (ಆ) | ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಟಿ 2009 ದಿನಾಂಕ: 15-05-2014 ರಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗೆ ಶೇ. 75 ರಷ್ಟು ಮತ್ತು ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು ಶೇ. 25 ರಷ್ಟು ಮಾಡಲು ಅವಕಾಶ ಕಲ್ಪಿಸಿರುವುದರಿಂದ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: **ಇಡಿ 185 ಡಿಜಿಡಿ 2017 (ಭಾಗ-3), ದಿನಾಂಕ: 15/10/2024** ರಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಉಪನ್ಯಾಸಕರ ನೇಮಕಾತಿಗೆ ಅಧಿಸೂಚಿತ ವಿಷಯಗಳ ಸ್ನಾತಕೋತ್ತರ ಪದವಿಯಲ್ಲಿ ಶೇಕಾಡ 55 ಅಂಕಗಳೊಂದಿಗೆ ಬಿ.ಇಡಿ. ಪದವಿಯನ್ನು ಹೊಂದಿರಬೇಕು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಅಧಿಸೂಚಿತ ವಿಷಯಗಳ ಪದವಿಯಲ್ಲಿ ಶೇಕಡ 50 ಅಂಕಗಳೊಂದಿಗೆ ಬಿ.ಇಡಿ. ಪದವಿಯನ್ನುಹೊಂದಿರಬೇಕು. ಮುಂದುವರೆದು ಮುಂಬಡ್ತಿ ನೀಡುವ ಹುದ್ದೆಗಳಿಗೆ ಅರ್ಹರಿರುವ ಸಹಶಿಕ್ಷಕರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 204 ಎಸ್ ಹೆಚ್ ಹೆಚ್ 2025, ದಿನಾಂಕ: 24-09-2025 ರಲ್ಲಿ ಅರ್ಹತಾ ಪರೀಕ್ಷೆಯನ್ನು ನಡೆಸಲು ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಸೆಂಟ್ರಲ್ ಜೂನಿಯರ್ ಕಾಲೇಜು ಆವರಣ, ಕಾವೇರಿ ಭವನದ ಎದರು, ಕೆಂಪೇಗೌಡ ರಸ್ತೆ, ಬೆಂಗಳೂರು ಇವರನ್ನು ಸಕ್ಷಮ ಪ್ರಾಧಿಕಾರಿಯಾನ್ನಾಗಿ ನಿರ್ದಿಷ್ಟಪಡಿಸಿ ಆದೇಶಿಸಲಾಗಿದೆ.<br><br>ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರ ವೃಂದದಿಂದ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡುವ ಸಂಬಂಧ ಅರ್ಹತಾ ಪರೀಕ್ಷೆ ನಡೆಸಲು ಅಧಿಸೂಚನೆ ಹೊರಡಿಸುವಂತೆ ದಿನಾಂಕ: |

| | | |
|---|---|---|
| | | 27.11.2025 ರಲ್ಲಿ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯಿಂದ ಕೋರಲಾಗಿದೆ.<br>ಅದರಂತೆ ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಅರ್ಹತಾ ಪರೀಕ್ಷೆ ನಡೆಸಿ, ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಸಲ್ಲಿಸಿದ ನಂತರ ಬಡ್ತಿ ನೀಡಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಇಪಿ 408 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು